**ದಿನಾಂಕಃ 25.09.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಅಪಘಾತವಾದ ನಂತರ ನನಗೆ ಪ್ರಜ್ಞೆ ಇರಲಿಲ್ಲ. ಅಪಘಾತದ ಬಗ್ಗೆ ಸ್ವಾಮಿ ಎಂಬುವವರು ದೂರು ನೀಡಿರುತ್ತಾರೆ. ಸದರಿ ವ್ಯಕ್ತಿ ನನ್ನೊಂದಿಗೆ ಆತನ ವಾಹನದ ಬಳಿ ಮಾತನಾಡುತ್ತಾ ನಿಂತಿದ್ದರು. ಸ್ವಾಮಿರವರಿಗೆ ಅಪಘಾತದಿಂದ ಗಾಯಗಳು ಆಗಿಲ್ಲ. ಅಪಘಾತ ರಸ್ತೆಯಲ್ಲಿ ಸಂಭವಿಸಿದೆ ಎಂದರೆ ಸರಿಯಲ್ಲ. ನಾವು ವೃತ್ತದ ಬಳಿ ನಿಂತಿದ್ದೆವು. ಸದರಿ ವೃತ್ತ ಮೂರು ರಸ್ತೆ ಕೂಡುವ ಸ್ಥಳ ಆಗಿದ್ದು, ಯಾವುದೇ ಸಿಗ್ನಲ್ ಇರುವುದಿಲ್ಲ. ಸದರಿ ರಸ್ತೆಯ ಅಗಲ 30 ಅಡಿ ಇರುತ್ತದೆ. ಆಪಾದಿತ ವಾಹನ ಬಲಗಡೆ ತಿರುವು ತೆಗೆದುಕೊಳ್ಳುವ ಸಲುವಾಗಿ ಬಂದಿತ್ತು ಎಂದರೆ ಸರಿ. ನಿಪಿ 4 ರ ರೀತ್ಯ ಅಪಘಾತ ರಸ್ತೆಯಲ್ಲಿ ಸಂಭವಿಸಿದೆ ಎಂದರೆ ಸರಿ. ನಾವು ಪಾದಾಚಾರಿ ಮಾರ್ಗದಲ್ಲಿ ನಿಂತು ಮಾತನಾಡುತ್ತಿದ್ದಲ್ಲಿ ಅಪಘಾತ ಆಗುತ್ತಿರಲಿಲ್ಲ ಎಂದರೆ ಸಾಕ್ಷಿಯು ನಾವು ಪಾದಾಚಾರಿ ಮಾರ್ಗದಲ್ಲಿಯೇ ನಿಂತಿದ್ದೆವು ಎಂದು ನುಡಿಯುತ್ತಾರೆ. ನಮ್ಮ ನಿರ್ಲಕ್ಷ್ಯತನದಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ.

ಅಪಘಾತವಾದ ನಂತರ ನನ್ನನ್ನು ಕುಣಿಗಲ್ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಆನಂತರ ಬೊರಿಂಗ್ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಎರಡೂ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡಿರುತ್ತಾರೆ ಎಂದರೆ ಸರಿ. ಪರಿಹಾರ ಪಡೆಯುವ ಉದ್ದೇಶದಿಂದ ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಸಣ್ಣಪುಟ್ಟ ಗಾಯಗಳು ಆಗಿದ್ದು, ಯಾವುದೇ ಮೂಳೆ ಮುರಿತ ಉಂಟಾಗಿಲ್ಲ ಎಂದರೆ ಸರಿಯಲ್ಲ. ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಮಾಡಿಲ್ಲ ಎಂದರೆ ಸರಿಯಲ್ಲ. ಚಿಕಿತ್ಸೆಗೆ ಮತ್ತು ಇತರೆ ಖರ್ಚುಗಳಿಗೆ ನಾನು ಹೇಳಿರುವಷ್ಟು ಹಣವನ್ನು ವ್ಯಯಿಸಿಲ್ಲ ಎಂದರೆ ಸರಿಯಲ್ಲ. ನಾನು ಮುಂದುವರೆದ ಚಿಕಿತ್ಸೆ ಪಡೆದಿಲ್ಲ ಮತ್ತು ಅದಕ್ಕೆ ಖರ್ಚು ಆಗಿಲ್ಲ ಎಂದರೆ ಸರಿಯಲ್ಲ.

ಅಪಘಾತವಾದಾಗ ನನಗೆ 51ಕ್ಕಿಂತ ಹೆಚ್ಚಿ ನ ವಯಸ್ಸು ಆಗಿತ್ತು ಎಂದರೆ ಸರಿಯಲ್ಲ. ನನ್ನ ಕೆಲಸ ಮತ್ತು ಆದಾಯಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಕೆಲಸ ಮಾಡುತ್ತಿಲ್ಲ ಮತ್ತು ನಾನು ಹೇಳುವಷ್ಟು ಆದಾಯ ನನಗೆ ಇಲ್ಲ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಈಗಲೂ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಆಪಾದಿತ ವಾಹನ ಡೈರಿ ವಾಹನ ಆಗಿತ್ತು. ಸದರಿ ವಾಹನ ನಮ್ಮ ಕಡೆಗೆ ಬರುವ ವಾಹನ ಆಗಿತ್ತು. ವಾಹನ ಸಂಬಂಧಪಟ್ಟ ವ್ಯಕ್ತಿಯ ಪರಿಚಯ ನನಗೆ ಇಲ್ಲ. ಆಪಾದಿತ ವಾಹನದ ಚಾಲಕನಿಗೆ ಚಾಲನಾ ಪರವಾನಗಿ ಇರಲಿಲ್ಲ ಎಂಬ ವಿಚಾರ ನನಗೆ ಗೊತ್ತಿಲ್ಲ. ಆಪಾದಿತ ವಾಹನದ ಚಾಲಕನಿಗೆ ಚಾಲನಾ ಪರವಾನಗಿ ಇಲ್ಲದ ಕಾರಣ 2ನೇ ಎದುರುದಾರರು ಪರಿಹಾರ ಪಾವತಿಸಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸ್ವಾ ಮಿ ರವರು ನನಗೆ ಪರಿಚಯಸ್ಥರಾಗಿದ್ದು, ಅವರಿಗೆ ಚಾಲನಾ ಪರವಾನಗಿ ಇದೆಯೋ, ಇಲ್ಲವೋ ಎಂದು ನನಗೆ ಮಾಹಿತಿ ಇಲ್ಲ. ಸ್ವಾ ಮಿರವರಿಗೆ ಚಾಲನಾ ಪರವಾನಗಿ ಇಲ್ಲ ಎಂಬ ವಿಚಾರ ನನಗೆ ಗೊತ್ತಿದ್ದರೂ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎರಡೂ ವಾಹನಗಳ ಮುಖಾಮುಖಿ ಡಿಕ್ಕಿಯಿಂದ ಅಪಘಾತವಾಗಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

1ನೇ ಎದುರುದಾರರು ಮತ್ತು ಅವರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**